ಶಿವಾಜಿನಗರದಲ್ಲಿ ವಕ್ಫ್ ಬೋರ್ಡಿನಿಂದ ಕೈಗೊಂಡ ಕಾರ್ಯಕ್ರಮಗಳು

4613 (5164) : ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಾಜಿನಗರ ವಿಧಾನಸಭಾ ಕ್ಷೇತ್ರದಲ್ಲಿ 2002–03ನೇ ಸಾಲಿನಲ್ಲಿ ವಕ್ಫ್‌ಬೋರ್ಡಿನಿಂದ ಕೈಗೊಂಡ ಕಾರ್ಯಕ್ರಮಗಳು ಯಾವುವು?

ಆ) ಇವುಗಳಿಗೆ ಖರ್ಚು ಮಾಡಿದ ಹಣವೆಷ್ಟು?

ಇ) 2003–04ನೇ ಸಾಲಿನಲ್ಲಿ ಕೈಗೊಂಡಿರುವ ಹಾಗೂ ಕೈಗೊಳ್ಳಲಿರುವ ಕಾರ್ಯಕ್ರಮಗಳು ಯಾವುವು?

ಶ್ರೀ ಎಂ.ಎಲ್. ಉಸ್ತಾದ್ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) 2002–03ನೆ ಸಾಲಿನಲ್ಲಿ ಶಿವಾಜಿನಗರ ವಿಧಾನಸಭಾ ಕ್ಷೇತ್ರದಲ್ಲಿ ವಕ್ಫ್ ಬೋರ್ಡಿನಿಂದ ಯಾವ ಕಾರ್ಯಕ್ರಮ ಕೈಗೊಂಡಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಈ ಸಾಲಿನಲ್ಲಿ ಈವರೆಗೂ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿರುವುದಿಲ್ಲ. ಮುಂದೆ ವಕ್ಫ್ ಸಂಸ್ಥೆಗಳ ಬೇಡಿಕೆಗನುಗುಣವಾಗಿ ಹಾಗೂ ಅನುದಾನದ ಲಭ್ಯತೆ ಆಧಾರದ ಮೇರೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಬೆಳಗಾವಿ ಜಿಲ್ಲೆಯಲ್ಲಿ ಬಾಲಕರ ವಸತಿ ನಿಲಯ ಪ್ರಾರಂಭಿಸುವುದರ ಬಗ್ಗೆ

4614 (5179) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡ್ಡವಾಡ ಗ್ರಾಮದಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಇದೆಯೆ;

ಆ) ಈ ಗ್ರಾಮದಲ್ಲಿ ಮಲಪ್ರಭಾ ಯೋಜನೆಯ ಮುಳುಗಡೆ ಪ್ರದೇಶದ ಜನರು ಹೆಚ್ಚಾಗಿ ವಲಸೆ ಬಂದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಮಲಪ್ರಭಾ ಮುಳುಕಡೆ ಪ್ರದೇಶದ ವಿದ್ಯಾರ್ಥಿಗಳ ಅನುಕೂಲತೆಗಾಗಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ಅವಶ್ಯವಿರುವ ಸುಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಈ) ದೊವಾಡ ಗ್ರಾಮದ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನಲ್ಲಿರುವ ವಿಜ್ಞಾನ ವಿಭಾಗವನ್ನು ಬೇರೆ ಕಡೆಗೆ ಸ್ಥಳಾಂತರಿಸುವುದರಿಂದ ಈಗ ಆ ಸರ್ಕಾರಿ ಕಟ್ಟಡ ಉಚಿತವಾಗಿ ಲಭ್ಯವಿರುವುದು ನಿಜವಲ್ಲವೆ;

ಉ) ಹಾಗಿದ್ದಲ್ಲಿ, ಕಲಾ ಮತ್ತು ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳ ಸಲುವಾಗಿ ಈ ಖಾಲಿ ಇರುವ ಕಟ್ಟಡದಲ್ಲಿ ಬಿ.ಸಿ.ಎಂ. ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಹೌದು

ಆ) ಹೌದು